ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1107(1547)**
ಮಾನ್ಯ ಸದಸ್ಯರ ಹೆಸರು : **ಶ್ರೀ.ಗಡ್ಡದೇವರಮಠ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ)**
ಉತ್ತರಿಸುವ ಸಚಿವರು : **ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)**

ಅ) ಲಕ್ಷ್ಮೇಶ್ವರ–ಹುಬ್ಬಳ್ಳಿ ರಸ್ತೆ ತುಂಬಾ ಹದಗೆಟ್ಟಿ ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.

ಆ) ಬಂದಿದ್ದಲ್ಲಿ, ಈ ರಸ್ತೆ ಸುಧಾರಣೆಗಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ ರಸ್ತೆಯನ್ನು ಈಗಾಗಲೇ ರಾಜ್ಯ ಹೆದ್ದಾರಿಯ ಮೂರು ವರ್ಷದ ನಿರ್ವಹಣೆಯ ಯೋಜನೆಯ ಗದಗ ಮತ್ತು ಧಾರವಾಡ ವಿಭಾಗದಲ್ಲಿ ಒಟ್ಟು 37 ಕಿಮೀ. ರಸ್ತೆಯನ್ನು ನಿರ್ವಹಣೆಗಾಗಿ ತೆಗೆದುಕೊಳ್ಳಲಾಗಿದೆ ಮತ್ತು ನಿರ್ವಹಣೆಯ ಕಾಮಗಾರಿಗಳು ಪ್ರಗತಿಯಲ್ಲಿವೆ.

ಇ) ಹಾಗಿದ್ದಲ್ಲಿ, ಈ ರಸ್ತೆ ಸುಧಾರಣೆಗಾಗಿ ಈವರೆಗೇನಾದರೂ ಅನುದಾನ ಬಿಡುಗಡೆ ಮಾಡಲಾಗಿದೆಯೇ;

ರಾಜ್ಯ ಹೆದ್ದಾರಿಯ ನಿರ್ವಹಣೆಯ ಯೋಜನೆಗೆ ರೂ.115 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಈ) ಇಲ್ಲದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1108(1548)**
ಸದಸ್ಯರ ಹೆಸರು : **ಶ್ರೀ.ಗಡ್ಡದೇವರಮಠ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ)**
ಉತ್ತರಿಸುವ ಸಚಿವರು : **ಶ್ರೀ ಹೆಚ್.ಡಿ.ಕುಮಾರ್‌ಸ್ವಾಮಿ (ಮುಖ್ಯಮಂತ್ರಿಗಳು)**

ಅ) ಗದಗ ಜಿಲ್ಲೆ ಲಕ್ಷ್ಮೇಶ್ವರ ನಗರವು ಸುಮಾರು 40ಸಾವಿರ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ಈ ಪಟ್ಟಣದಲ್ಲಿ ಒಳಚರಂಡಿ ಯೋಜನೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಬಂದಿದೆ.